ಕೊಳವೆಬಾವಿಗಳ ಮಂಜೂರಾತಿ

440(657); ಡಾ॥ ಉಮೇಶ್ ಜಿ. ಜಾಧವ್

ಅ) ಕರ್ನಾಟಕ ರಾಜ್ಯದಲ್ಲಿರುವ ಹಿಂದುಳಿದ ವರ್ಗ, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ಜನಾಂಗದವರಿಗೆ ಕೃಷಿ ಚಟುವಟಿಕೆಗಳನ್ನು ನಡೆಸಲು ಅನುಕೂಲವಾಗುವಂತೆ ಗಂಗಾ ಕಲ್ಯಾಣ ಯೋಜನೆಯಡಿ ಹೆಚ್ಚುವರಿ ಕೊಳವೆ ಬಾವಿಗಳನ್ನು ಮಂಜೂರು ಮಾಡುವ ಪ್ರಸ್ತಾವನೆಯು ಸರ್ಕಾರದ ಮುಂದಿದೆಯೇ;

ಆ) ಮುಂದಿದ್ದಲ್ಲಿ, ಪ್ರಸಕ್ತ ಸಾಲಿನಲ್ಲಿ ಎಷ್ಟು ಕೊಳವೆಬಾವಿಗಳನ್ನು ಮಂಜೂರು ಮಾಡಲಾಗುವುದು ಹಾಗೂ ಚಿಂಚೋಳಿ ವಿಧಾನ ಸಭಾ ಕ್ಷೇತ್ರಕ್ಕೆ ಎಷ್ಟು ಕೊಳವೆಬಾವಿಗಳನ್ನು ಮಂಜೂರು ಮಾಡಲಾಗುವುದು (ವಿವರ ನೀಡುವುದು)?

ಶ್ರೀ ಹೆಚ್. ಆಂಜನೇಯ (ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು)

ಅ) **ಡಿ. ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ**

ಗಂಗಾ ಕಲ್ಯಾಣ ಯೋಜನೆಯಡಿ ಹೆಚ್ಚುವರಿ ಕೊಳವೆ ಬಾವಿಗಳನ್ನು ಮಂಜೂರು ಮಾಡುವ ಪ್ರಸ್ತಾವನೆ ಸರ್ಕಾರದ ಮುಂದೆ ಇರುವುದಿಲ್ಲ.

ಡಾ॥ ಬಿ.ಆರ್. ಅಂಬೇಡ್ಕರ್ ಅಭಿವೃದ್ಧಿ ನಿಗಮ ನಿಯಮಿತ

ಕರ್ನಾಟಕ ರಾಜ್ಯದಲ್ಲಿರುವ ಪರಿಶಿಷ್ಟ ಜಾತಿಯ ಫಲಾನುಭವಿಗಳಿಗೆ ಗಂಗಾ ಕಲ್ಯಾಣ ಯೋಜನೆಯಡಿ ಆಯವ್ಯಯದಲ್ಲಿ ನಿಗದಿಪಡಿಸಿದಂತೆ ಆಯಾ ವಿಧಾನಸಭಾ ಕ್ಷೇತ್ರದ ಜನಸಂಖ್ಯೆಗನುಗುಣವಾಗಿ ಕೊಳವೆಬಾವಿಗಳಿಗೆ ಗುರಿ ನಿಗದಿಪಡಿಸಲಾಗುವುದು. ಹೆಚ್ಚುವರಿ ಅನುದಾನ ಬಿಡುಗಡೆಯಾದಲ್ಲಿ ಜನಸಂಖ್ಯೆಗನುಗುಣವಾಗಿ ಹೆಚ್ಚುವರಿ ಕೊಳವೆಬಾವಿಗಳನ್ನು ಮಂಜೂರು ಮಾಡಲು ಕ್ರಮವಹಿಸಲಾಗುವುದು.

ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮ

2014–15 ನೇ ಸಾಲಿಗೆ ಪರಿಶಿಷ್ಟ ಪಂಗಡದವರ ಜನಾಂಗದವರಿಗೆ ಕೃಷಿ ಚಟುವಟಿಕೆಗಳನ್ನು ನಡೆಸಲು ಅನುಕೂಲವಾಗುವಂತೆ ಗಂಗಾ ಕಲ್ಯಾಣ ಯೋಜನೆಯಡಿ 4667 ಬೌತಿಕ ಗುರಿ ನಿಗದಿಪಡಿಸಲಾಗಿದ್ದು, ಇದನ್ನು ಹೊರತುಪಡಿಸಿ ಹೆಚ್ಚುವರಿ ಕೊಳವೆಬಾವಿಗಳನ್ನು ಮಂಜೂರು ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿರುವುದಿಲ್ಲ.

ಆ) **ಡಿ. ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ**

ಅನ್ವಯಿಸುವುದಿಲ್ಲ.

ಡಾ॥ ಬಿ.ಆರ್. ಅಂಬೇಡ್ಕರ್ ಅಭಿವೃದ್ಧಿ ನಿಗಮ ನಿಯಮಿತ

ಅನ್ವಯಿಸುವುದಿಲ್ಲ.

ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮ

ಅನ್ವಯಿಸುವುದಿಲ್ಲ.

ಸಮುದಾಯ ಭವನಗಳು

441(658); ಡಾ॥ ಉಮೇಶ್ ಜಿ. ಜಾಧವ್ (ಚಿಂಚೋಳಿ)

ಅ) ಚಿಂಚೋಳಿ ವಿಧಾನಸಭಾ ಕ್ಷೇತ್ರಕ್ಕೆ ಸಮುದಾಯ ಭವನಗಳನ್ನು ಮಂಜೂರು ಮಾಡುವ ಪ್ರಸ್ತಾವನೆಯು ಸರ್ಕಾರದ ಮುಂದಿದೆಯೇ;

ಆ) ಮುಂದಿದ್ದಲ್ಲಿ, ಎಷ್ಟು ಕಾಲ ಮಿತಿಯೊಳಗೆ ಮಂಜೂರು ಮಾಡಲಾಗುವುದು (ವಿವರ ನೀಡುವುದು)?